ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ –೧೬೧	ಬೆಂಗಳೂರು, ಮಂಗಳವಾರ, ೧೦, ಫೆಬ್ರವರಿ, ೨೦೨೬(ಮಾಘ, ೨೧, ಶಕವರ್ಷ, ೧೯೪೭)	ಸಂಚಿಕೆ ೨೮
Volume - 161	BENGALURU, TUESDAY, 10, FEBRUARY, 2026(MAGHA, 21, SHAKAVARSHA, 1947)	Issue 28

ಭಾಗ ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬೆಳಗಾವಿ ಜಿಲ್ಲೆ ವ್ಯಾಪ್ತಿಯಲ್ಲಿ ನಿಧನ ಹೊಂದಿರುವ ನೋಟರಿಗಳ ಹೆಸರನ್ನು ನೋಟರಿಗಳ ಪಟ್ಟಿಯಿಂದ ತೆಗೆಯುವ ಬಗ್ಗೆ.

ಓದಲಾಗಿದೆ:- (1) ಸರ್ಕಾರದ ಪತ್ರ ಸಂಖ್ಯೆ: ಲಾ-ಎಲ್‌ಸಿಎಲ್/195/2025, ದಿನಾಂಕ : 24-07-2025.
(2) ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಜಿಲ್ಲೆ ಇವರ ಪತ್ರ ಸಂಖ್ಯೆ: RK/1554/2025, ದಿನಾಂಕ : 01-09-2025.

* * * * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಪತ್ರದಲ್ಲಿ ಬೆಳಗಾವಿ ಜಿಲ್ಲೆಯ ಸವದತ್ತಿ ಕಂದಾಯ ತಾಲ್ಲೂಕಿಗೆ ಹೆಚ್ಚುವರಿ ನೋಟರಿ ಹುದ್ದೆ ಸೃಜಿಸುವ ಬಗ್ಗೆ ಪರಿಶೀಲಿಸಲು ಕೆಲವು ಅಂಶಗಳಿಗೆ ಮಾಹಿತಿ ಒದಗಿಸುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಜಿಲ್ಲೆ ಇವರಿಗೆ ಪತ್ರ ಬರೆಯಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ದಿನಾಂಕ : 01-09-2025ರ ಪತ್ರದಲ್ಲಿ ಬೆಳಗಾವಿ ಜಿಲ್ಲೆಯ ಸವದತ್ತಿ ಕಂದಾಯ ತಾಲ್ಲೂಕಿನಲ್ಲಿ ರಾಜ್ಯ ಸರ್ಕಾರದಿಂದ ನೋಟರಿಯಾಗಿ ನೇಮಕಗೊಂಡು ಕಾರ್ಯನಿರ್ವಹಿಸುತ್ತಿದ್ದ ಈ ಕೆಳಕಂಡ ನೋಟರಿಗಳು ಮರಣ ಹೊಂದಿರುವುದಾಗಿ ತಿಳಿಸಿ, ಮರಣ ಪ್ರಮಾಣ ಪತ್ರದ ಪ್ರತಿಯನ್ನು ಸರ್ಕಾರಕ್ಕೆ ಕಳುಹಿಸಿರುತ್ತಾರೆ.

ಕ್ರ. ಸಂ.	ನೋಟರಿಯ ಹೆಸರು	ಕಂದಾಯ ತಾಲ್ಲೂಕು	ನೇಮಕಾತಿ ಹೊಂದಿದ ಆದೇಶ & ದಿನಾಂಕ	ಮರಣ ಹೊಂದಿದ ದಿನಾಂಕ
1	ಶ್ರೀ ಬಸವರಾಜ್ ಗಂಗಪ್ಪ ಹೋಳಿ	ಸವದತ್ತಿ	ಲಾ ಎಲ್‌ಸಿಎಲ್ 8 2020 (ಭಾ-1), ದಿ: 18-01-2022.	08-07-2025
2	ಶ್ರೀ ರಜಪೂತ್ ಬಾಲಸಿಂಗ್	ಸವದತ್ತಿ	ಲಾ 319 ಎಲ್‌ಸಿಎಲ್ 1998, ದಿ: 20-12-1999.	08-06-2025

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಜಿಲ್ಲೆ ಇವರು ಸಲ್ಲಿಸಿರುವ ಪತ್ರ ಮತ್ತು ದಾಖಲೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಲಾ-ಎಲ್‌ಸಿಎಲ್/195/2025, ಬೆಂಗಳೂರು, ದಿನಾಂಕ : 03-02-2026

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಳಗಾವಿ ಜಿಲ್ಲೆ ವ್ಯಾಪ್ತಿಯ ಈ ಕೆಳಕಂಡ ನೋಟರಿಗಳು ನಿಧನ ಹೊಂದಿರುವುದರಿಂದ, ಸದರಿಯವರುಗಳ ಹೆಸರನ್ನು ನೋಟರಿ ರಿಜಿಸ್ಟರ್‌ನಿಂದ ಶಾಶ್ವತವಾಗಿ ತೆಗೆಯಲಾಗಿದೆ.

ಕ್ರ. ಸಂ.	ನೋಟರಿಯ ಹೆಸರು	ಕಂದಾಯ ತಾಲ್ಲೂಕು	ನೇಮಕಾತಿ ಹೊಂದಿದ ಆದೇಶ & ದಿನಾಂಕ	ಮರಣ ಹೊಂದಿದ ದಿನಾಂಕ
1	ಶ್ರೀ ಬಸವರಾಜ್ ಗಂಗಪ್ಪ ಹೋಳಿ	ಸವದತ್ತಿ	ಲಾ ಎಲ್‌ಸಿಎಲ್ 8 2020 (ಭಾ-1), ದಿ: 18-01-2022.	08-07-2025
2	ಶ್ರೀ ರಜಪೂತ್ ಬಾಲಸಿಂಗ್	ಸವದತ್ತಿ	ಲಾ 319 ಎಲ್‌ಸಿಎಲ್ 1998, ದಿ: 20-12-1999.	08-06-2025

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಆದಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾನೂನು, ನ್ಯಾಯ ಮತ್ತು
ಮಾನವ ಹಕ್ಕುಗಳ ಇಲಾಖೆ (ಆಡಳಿತ-2).

PR-29

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೈಲಹೊಂಗಲ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ-II) ಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 253 ಬೆಮಪ್ರಾ 2022, ಬೆಂಗಳೂರು, ದಿನಾಂಕ:21.11.2022.
2. ಮುಖ್ಯಾಧಿಕಾರಿ, ಪುರಸಭೆ ಬೈಲಹೊಂಗಲ ರವರ ಪತ್ರ ಸಂಖ್ಯೆ: ಪುಯೋಪ್ರಾಬೈ/ ಬೈಲಹೊಂಗಲ/ ಮ.ಯೋ.ಪ-2/ 2025-26/720, ದಿನಾಂಕ:25.11.2025
3. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ ರವರ ಏಕ ಕಡತ ಸಂಖ್ಯೆ: DTCP-1-MPF-2022-23 ದಿನಾಂಕ:17.12.2025.

******

ಪ್ರಸ್ತಾವನೆ:

ಮೇಲೆ ಓದಲಾದ ಉಲ್ಲೇಖ (1)ರ ಸರ್ಕಾರಿ ಆದೇಶದಲ್ಲಿ ಬೈಲಹೊಂಗಲ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ-II) ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರನ್ವಯ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ.

ಮೇಲೆ ಓದಲಾದ ಉಲ್ಲೇಖ(2)ರ ಪತ್ರದಲ್ಲಿ ಬೈಲಹೊಂಗಲ ಪುರಸಭೆ ಯೋಜನಾ ಪ್ರಾಧಿಕಾರವು ಬೈಲಹೊಂಗಲ ಸ್ಥಳೀಯ ಯೋಜನಾ ಪ್ರದೇಶಕ್ಕೆ ಸಿದ್ಧಪಡಿಸಿರುವ ಮಹಾಯೋಜನೆಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ಮತ್ತು (2) ರನ್ವಯ ಕ್ರಮ ಜರುಗಿಸಿ ಮಹಾಯೋಜನೆ ನಕ್ಷೆಗಳನ್ನು ಹಾಗೂ ವರದಿಗಳನ್ನು ಸಿದ್ಧಪಡಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತದೆ.

ಮೇಲೆ ಓದಲಾದ (3)ರ ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ ರವರ ಏಕ ಕಡತದಲ್ಲಿ ಬೈಲಹೊಂಗಲ ಪಟ್ಟಣದ ಜನ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

ಸಂಖ್ಯೆಯು 2011ರಲ್ಲಿ 49182 ಇದ್ದು, ಯೋಜನಾ ಅವಧಿಗೆ ಅಂದರೆ 2041ನೇ ಇಸವಿಗೆ ಜನ ಸಂಖ್ಯೆಯು ಸುಮಾರು 77200 ಆಗಬಹುದೆಂದು ಅಂದಾಜಿಸಿ ಮಹಾಯೋಜನೆಯನ್ನು ಸಿದ್ಧಪಡಿಸಲಾಗಿದೆ. ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 1498.57 ಹೆಕ್ಟೇರ್ ವಿಸ್ತೀರ್ಣದಲ್ಲಿ 1483.80 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಿರುತ್ತಾರೆ.

ಪಟ್ಟಣದ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ 1483.80 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 828.73 ಹೆಕ್ಟೇರ್(ಶೇ:55.84), ವಾಣಿಜ್ಯಕ್ಕಾಗಿ 102.32 ಹೆಕ್ಟೇರ್(ಶೇ:06.90), ಕೈಗಾರಿಕೆಗಾಗಿ 15.48 ಹೆಕ್ಟೇರ್(ಶೇ:01.04) ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ 171.47 ಹೆಕ್ಟೇರ್ (ಶೇ:11.56) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 85.71 ಹೆಕ್ಟೇರ್ (ಶೇ:5.78) , ಸಾರ್ವಜನಿಕ ಉಪಯುಕ್ತೆಗಾಗಿ 11.39 ಹೆಕ್ಟೇರ್(ಶೇ:0.77), ಹಾಗೂ ಸಾರಿಗೆ/ಸಂಪರ್ಕ ವಲಯಕ್ಕೆ 268.70 ಹೆಕ್ಟೇರ್ (ಶೇ.18.11) ಪ್ರದೇಶವನ್ನು ಮೀಸಲಿಟ್ಟು ಭೂ ಉಪಯೋಗವನ್ನು ನಿಗಧಿಪಡಿಸಲಾಗಿದೆ.

ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 401 ಬೆಮಪ್ರಾ 2025(ಇ-ಕಡತ)

ಬೆಂಗಳೂರು, ದಿನಾಂಕ:04.02.2026

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಬೈಲಹೊಂಗಲ ಸ್ಥಳೀಯ ಯೋಜನಾ ಪ್ರದೇಶದ ಅಂತಿಮ ಮಹಾಯೋಜನೆ (ಪ-II)ಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಷರತ್ತು:

- ಈ ಆದೇಶದ ದಿನಾಂಕದಿಂದ ಒಂದು ವರ್ಷದವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಕೂಡದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲತಾ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ),
ನಗರಾಭಿವೃದ್ಧಿ ಇಲಾಖೆ.

PR-30

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH